# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 148 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವವರು | : | ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು |
| ಉತ್ತರಿಸುವ ದಿನಾಂಕ | : | 14.02.2023 |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಜಾಗ್ರಿ ಉತ್ಪನ್ನಗಳ ಘಟಕಗಳಿಗೆ 2020-25 ನೂತನ ಕೈಗಾರಿಕಾ ನೀತಿ ಅಡಿಯಲ್ಲಿ ರಿಯಾಯಿತಿ ಮತ್ತು ಪ್ರೋತ್ಸಾಹಗಳನ್ನು ಕೈಬಿಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿರುತ್ತದೆ. |
| (ಆ) | ಬಂದಿದ್ದಲ್ಲಿ, ರಿಯಾಯಿತಿ ಮತ್ತು ಪ್ರೋತ್ಸಾಹಗಳನ್ನು ಕೈಬಿಡಲು ಕಾರಣವೇನು; | ಜಾಗ್ರಿ ಉತ್ಪನ್ನಗಳಿಗೆ ಯಾವುದೇ ಯಂತ್ರೋಪಕರಣಗಳನ್ನು ಅಳವಡಿಸದೇ ಇರುವ ಕಾರಣ ಹಾಗೂ ಸಾಂಪ್ರದಾಯಿಕ ಪದ್ಧತಿಯ ಮೂಲಕ ಉತ್ಪಾದಿಸಿರುತ್ತಿರುವುದರಿಂದ ಈ ಘಟಕಗಳಿಗೆ ರಿಯಾಯಿತಿ ಮತ್ತು ಪ್ರೋತ್ಸಾಹಗಳನ್ನು ನೀಡುತ್ತಿರುವುದಿಲ್ಲ. |
| (ಇ) | ಸರ್ಕಾರವು ಜಾಗ್ರಿ ಉತ್ಪನ್ನ ಕೈಗಾರಿಕೆಗಳಿಗೆ ಪ್ರೋತ್ಸಾಹ ಮತ್ತು ರಿಯಾಯಿತಿಗೆ ಅವಕಾಶ ಮಾಡಿಕೊಡಲು ಸರ್ಕಾರ ಕೈಗೊಂಡ ಕ್ರಮವೇನು?(ವಿವರ ನೀಡುವುದು) | ಜಾಗ್ರಿ ಉತ್ಪನ್ನಗಳ (Jaggary Products) ಕೈಗಾರಿಕೆಗಳನ್ನು ಕೈಗಾರಿಕಾ ನೀತಿ 2020-25ರಲ್ಲಿ ಪ್ರೋತ್ಸಾಹ ಮತ್ತು ರಿಯಾಯಿತಿಗಳನ್ನು ಪರಿಗಣಿಸುವ ಬಗ್ಗೆ ಮನವಿಗಳು ಸ್ವೀಕೃತವಾಗುತ್ತಿದ್ದು, ಅದರಂತೆ ವೈಜ್ಞಾನಿಕ ರೀತಿಯಲ್ಲಿ ಬೆಲ್ಲ ಮತ್ತು ಉಪ ಉತ್ಪನ್ನಗಳನ್ನು ಪ್ರೋತ್ಸಾಹಿಸುವ ದೃಷ್ಟಿಯಿಂದ FSSAI Certificate ನ್ನು ಪಡೆದು ಯಾಂತ್ರೀಕೃತ ಪ್ರಕ್ರಿಯೆಯಲ್ಲಿ Jaggary Making and by products ಉತ್ಪಾದನಾ ಘಟಕಗಳಿಗೆ ರಿಯಾಯಿತಿ ಮತ್ತು ಪ್ರೋತ್ಸಾಹಗಳನ್ನು ಕಲ್ಪಿಸುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ. |

ಸಿಐ 30 ಎಸ್‌ಪಿಐ 2023

(ಡಾ. ಮುರುಗೇಶ ಆರ್. ನಿರಾಣಿ)
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು